ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 18/3/2020

ನಾಟಕ ರಾಜ್ಯಪಾಲ ಸಿಎಂ ಮಧ್ಯೆ ಲೆಟರ್ ವಾರ್

# ಮ.ಪ್ರ. ಸರ್ಕಾರ ಮತ್ತೆ ಸಡ್ಡು: ನಿನ್ನೆಯೂ ವಿಶ್ವಾಸಮತ ಇಲ್ಲ

ಭೋಪಾಲ್/ನವದೆಹಲಿ: ರಾಜ್ಯಪಾಲ ಟಂಡನ್ ನೀಡಿದ್ದ ಸೂಚನೆಗೆ ಕಮಲ್‌ನಾಥ್ ನೇತೃತ್ವದ ಮಧ್ಯಪ್ರದೇಶದ ಸರ್ಕಾರ ಮತ್ತೊಮ್ಮೆ ಸಡ್ಡು ಹೊಡೆದಿದೆ. ಇದರಿಂದಾಗಿ, ಮಂಗಳವಾರವೂ ವಿಶ್ವಾಸಮತ ಯಾಚನೆ ಪ್ರಕ್ರಿಯೆಯೇ ನಡೆದಿಲ್ಲ.



ಏತನ್ಮಧ್ಯೆ, ತ್ವರಿತವಾಗಿ ಬಹುಮತ ಸಾಬೀತಿಗೆ ಸೂಚನೆ ನೀಡಬೇಕು ಎಂದು ಬಿಜೆಪಿ ನಾಯಕ ಶಿವರಾಜ ಸಿಂಗ್ ಚೌಹಾಣ್ ಸಲ್ಲಿಸಿದ್ದ ಅರ್ಜಿಯನ್ನು ಮಂಗಳ ವಾರ ವಿಚಾರಣೆ ನಡೆಸಿರುವ ಸರ್ವೋಚ್ಚ ನ್ಯಾಯಾಲಯ, ಬುಧವಾರ ಬೆಳಗ್ಗೆ 10.30ರೊಳಗೆ ಪ್ರತಿಕ್ರಿಯೆ ನೀಡುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಈ ಮಧ್ಯೆ, ಬೆಂಗಳೂರಿನಲ್ಲಿರುವ ಶಾಸಕರನ್ನು ಭೇಟಿ ಮಾಡಲು ಅವಕಾಶ ಕಲ್ಪಿಸುವಂತೆ ಕೇಂದ್ರ ಹಾಗೂ ಕರ್ನಾಟಕ ಸರ್ಕಾರಕ್ಕೆ ಸೂಚನೆ ನೀಡಬೇಕು ಎಂದು ಮಧ್ಯಪ್ರದೇಶ ಕಾಂಗ್ರೆಸ್ ಸುಪ್ರೀಂಗೆ ಅರ್ಜಿ ಸಲ್ಲಿಸಿದೆ.

ಪತ್ರ ಸಮರ: ಮಂಗಳವಾರ ವಿಶ್ವಾಸಮತ ಸಾಬೀತುಪಡಿಸದಿದ್ದರೆ ನಿಮಗೆ ಬಹುಮತವಿಲ್ಲ ಇಲ್ಲ ಎಂದು ಭಾವಿಸಬೇಕಾಗುತ್ತದೆ' ಎನ್ನುರಾಜ್ಯಪಾಲರ ಪತ್ರಕ್ಕೆ ಗರಂ ಆಗಿರುವ ಕಮಲ್, ಇದು ಅಸಂವಿಧಾನಿಕ. ಅದಕ್ಕೆ ಆಧಾರವಿಲ್ಲ ಎಂದು ಖಾರವಾಗಿ ತಿಳಿಸಿದ್ದಾರೆ.